

ಬಿಡೆನೊ ನಿನ್ನಂಘ್ರಿ ಶ್ರೀನಿವಾಸ



ಬಿಡೆನೋ ನಿನ್ನಂಘ್ರಿ ಶ್ರೀನಿವಾಸ ಎನ್ನ
ದುಡಿಸಿ ಕೊಳ್ಳಲೋ ಶ್ರೀನಿವಾಸ ನಿನ್ನ
ನುಡಿಯೇ ಜಿತಲ್ಲೊ ಶ್ರೀನಿವಾಸ ಎನ್ನ
ನಡೆತಪ್ಪು ಕಾಯೋ ಶ್ರೀನಿವಾಸ ||ಪ||

ಬಡಿಯೋ ಬೆನ್ನಲಿ ಶ್ರೀನಿವಾಸ ಎ
ನ್ನೊಡಲ ಹೊಯ್ಯದಿರೊ ಶ್ರೀನಿವಾಸ ನಾ
ಬಡವ ಕಾಣೆಲೋ ಶ್ರೀನಿವಾಸ ನಿ
ನ್ನೊಡಲ ಹೊಕ್ಕೆನೋ ಶ್ರೀನಿವಾಸ. ||೧||

ಪಂಜು ಪಿಡಿವೆನೋ ಶ್ರೀನಿವಾಸ ನಿ
ನ್ನಂಜಲ ಬಳಿದುಂಬೆ ಶ್ರೀನಿವಾಸ ನಾ
ಸಂಜೆ ಉದಯಕೆ ಶ್ರೀನಿವಾಸ ಕಾ
ಳಂಜಿಯ ಪಿಡಿವೇ ಶ್ರೀನಿವಾಸ. ।೨।।

ಸತ್ತಿಗೆ ಚಾಮರ ಶ್ರೀನಿವಾಸ ನಾ
ನೆತ್ತಿನಲಿವೆನೋ ಶ್ರೀನಿವಾಸ ನಿನ್ನ
ರತ್ನದ ಹಾವಿಗೆ ಶ್ರೀನಿವಾಸ ನಾ
ಹೊತ್ತು ಕುಣಿವೆನೋ ಶ್ರೀನಿವಾಸ. ||೩||

ಹೇಳಿದಂತಾಲಿಹೆ ಶ್ರೀನಿವಾಸ ನಿ
ನ್ನಾಳಿಗಾಳಾಗಿಹೆ ಶ್ರೀನಿವಾಸ ಅವ
ರೂಳಿಗವ ಮಾಳ್ಪೆ ಶ್ರೀನಿವಾಸ ಎನ್ನ
ಪಾಲಿಸೊ ಬಿಡದೇ ಶ್ರೀನಿವಾಸ. ||೪||

ನಿನ್ನ ನಾಮ ಹೋಳಿಗೆ ಶ್ರೀನಿವಾಸ ಕಳ್ಳ
ಕುನ್ನಿ ನಾನಾಗಿಹೆ ಶ್ರೀನಿವಾಸ ಕಟ್ಟಿ
ನಿನ್ನೊವರೊದ್ದರೆ ಶ್ರೀನಿವಾಸ ಎನ
ಗಿನ್ನು ಲಜ್ಜೇತಕೆ ಶ್ರೀನಿವಾಸ. ||೫||

ಬೀಸಿಕೊಲ್ಲಲವರೆ ಶ್ರೀನಿವಾಸ ಮುದ್ರೆ
ಕಾಸಿ ಚುಚ್ಚಲವರೆ ಶ್ರೀನಿವಾಸ ಮಿಕ್ಕ
ಘಾಸಿಗಂಜೆನಯ್ಯ ಶ್ರೀನಿವಾಸ ಎಂಜ
ಲಾಸೆಯ ಬಂಟ ನಾ ಶ್ರೀನಿವಾಸ. ||೬||

ಹೇಸಿ ನಾನಾದರೆ ಶ್ರೀನಿವಾಸ ಹರಿ
ದಾಸರೊಳು ಪೊಕ್ಕೆ ಶ್ರೀನಿವಾಸ ಅವರ
ಭಾಷೆಯ ಕೇಳಿಹೆ ಶ್ರೀನಿವಾಸ ಆ
ವಾಸಿಯ ಸೈರಿಸೋ ಶ್ರೀನಿವಾಸ ||೭||

ತಿಂಗಳವನಲ್ಲ ಶ್ರೀನಿವಾಸ ವತ್ಸ
ರಂಗಳವನಲ್ಲ ಶ್ರೀನಿವಾಸ ರಾ
ಜಂಗಳ ಸವಡಿಪೆ ಶ್ರೀನಿವಾಸ ಭ
ವಂಗಳ ದಾಟುವೆ ಶ್ರೀನಿವಾಸ. ||೮||

ನಿನ್ನವ ನಿನ್ನವ ಶ್ರೀನಿವಾಸ ನಾ
ನನ್ಯವನರಿಯೆನೊ ಶ್ರೀನಿವಾಸ ಅಯ್ಯಾ
ಮನ್ನಿಸೊ ತಾಯ್ತಂದೆ ಶ್ರೀನಿವಾಸ ಪು
ಸನ್ನವೆಂಕಟಾದ್ರಿ ಶ್ರೀನಿವಾಸ. ||೯||

